ಕರ್ನಾಟಕ ಸರ್ಕಾರ

# ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ,
ಕಾಳಿದಾಸ ಮಾರ್ಗ, ಗಾಂಧಿನಗರ, ಬೆಂಗಳೂರು-560009.

ಸಂಖ್ಯೆ:ಕೆಪಿಆರ್‌ಸಿ-ಜಿಪಿಎ/ಪಿಡಿಓ/75/2023 ದಿನಾಂಕ:11.07.2023.

**ಇವರಿಗೆ,**

ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,

ಮಾನ್ಯರೇ,

**ವಿಷಯ:** ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ತಮ್ಮ ಪ್ರವಾಸ ಕಾರ್ಯಕ್ರಮವನ್ನು ಪ್ರಕಟಿಸುವ ಬಗ್ಗೆ ಮತ್ತು ಗ್ರಾಮ ಪಂಚಾಯತಿ ಸಿಬ್ಬಂದಿಗಳು ಕಡ್ಡಾಯವಾಗಿ ಪಂಚತಂತ್ರ 2.0 ತಂತ್ರಾಂಶದಲ್ಲಿ ಬಯೋಮೆಟ್ರಿಕ್-ಹಾಜರಾತಿಯನ್ನು ದಾಖಲಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 313 ಗ್ರಾಪಂಕಾ 2013, ಬೆಂಗಳೂರು, ದಿನಾಂಕ:03.03.2014.

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿನ ಸರ್ಕಾರಿ ನೌಕರರಾದ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿ (ಗ್ರೇಡ್-1 ಮತ್ತು ಗ್ರೇಡ್-2), ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳ ಅಧಿಕಾರ ಮತ್ತು ಜವಾಬ್ದಾರಿಗಳನ್ನು ನಿರ್ವಹಿಸಲು ಕಾರ್ಯ ಹಂಚಿಕೆ ಮಾಡಿ ಸರ್ಕಾರವು ಆದೇಶಿಸಿದೆ.

1. ಗ್ರಾಮೀಣ ಪ್ರದೇಶಗಳಲ್ಲಿ ವಾಸಿಸುತ್ತಿರುವ ಸಾರ್ವಜನಿಕರಿಗೆ ಹಲವಾರು ವೈಯಕ್ತಿಕ, ಸಮುದಾಯ, ಸವಲತ್ತುಗಳನ್ನು ನೀಡುವಲ್ಲಿ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 58 ರಲ್ಲಿ ಉಲ್ಲೇಖಿಸಿರುವಂತೆ ಗ್ರಾಮ ಪಂಚಾಯತಿಗಳು ಕರ್ತವ್ಯ ನಿರ್ಹಿಸಬೇಕಾಗಿದ್ದು, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಸಾರ್ವಜನಿಕರ ಭೇಟಿಗಾಗಿ ತಮ್ಮ ಪ್ರತಿದಿನದ ಕಾರ್ಯಕ್ರಮದಲ್ಲಿ ನಿಗಧಿತ ಸಮಯವನ್ನು ನಿಗಧಿಪಡಿಸಿ, ಆ ಸಮಯದಲ್ಲಿ ಗ್ರಾಮ ಪಂಚಾಯತಿ ಕಛೇರಿಯಲ್ಲಿದ್ದು, ಸಾರ್ವಜನಿಕರ ಮನವಿಗಳಿಗೆ ಸ್ಪಂದಿಸುವುದು ಹಾಗೂ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ಉಲ್ಲೇಖಿತ ಸರ್ಕಾರದ ಆದೇಶದನ್ವಯ ತಮ್ಮ ಕಾರ್ಯಪ್ರಭಾರವನ್ನು ನಿರ್ವಹಿಸಬೇಕಾಗಿದ್ದು, ಪ್ರತಿ ವಾರ ಸೋಮವಾರದಿಂದ ಶನಿವಾರದವರೆಗೆ ತಮ್ಮ ಪ್ರತಿದಿನದ ಪ್ರವಾಸ ಕಾರ್ಯಕ್ರಮ (ಕ್ಷೇತ್ರ ಭೇಟಿ, ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿಗಳಲ್ಲಿನ ಸಭೆಯಲ್ಲಿ ಭಾಗವಹಿಸುವಿಕೆ, ತರಬೇತಿಗಳಲ್ಲಿ ಭಾಗವಹಿಸುವಿಕೆ ಹಾಗೂ ಕಛೇರಿಯಲ್ಲಿ ಲಭ್ಯವಿರುವ ಮಾಹಿತಿ)ದ ವಿವರವನ್ನು ಕಡ್ಡಾಯವಾಗಿ ಗ್ರಾಮ ಪಂಚಾಯತಿ ಕಾರ್ಯಾಲಯದ ನೋಟೀಸ್ ಬೋರ್ಡ್‌ನಲ್ಲಿ ಪ್ರಕಟಿಸುವುದು ಹಾಗೂ ಪ್ರವಾಸ ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತಿ ಕಛೇರಿಯಲ್ಲಿ ಸಾರ್ವಜನಿಕರ ಭೇಟಿಗೆ ನಿಗಧಿಪಡಿಸಿದ ಸಮಯದಲ್ಲಿ ಗ್ರಾಮ ಪಂಚಾಯತಿ ಕಛೇರಿಯಲ್ಲಿ ಕಡ್ಡಾಯವಾಗಿ ಹಾಜರಿದ್ದು, ಸಾರ್ವಜನಿಕರ ಕುಂದು ಕೊರತೆಗಳಿಗೆ ಸ್ಪಂದಿಸಿ ನಿಯಮಾನುಸಾರ ಸೂಕ್ತ ಕ್ರಮವಹಿಸುವುದು.
2. ಗ್ರಾಮ ಪಂಚಾಯತಿಗಳಲ್ಲಿನ ಸರ್ಕಾರಿ ನೌಕರರಾದ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿ (ಗ್ರೇಡ್-1 ಮತ್ತು ಗ್ರೇಡ್-2), ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳು ಕಡ್ಡಾಯವಾಗಿ ಪ್ರತಿನಿತ್ಯ ಪಂಚತಂತ್ರ 2.0 ತಂತ್ರಾಂಶದಲ್ಲಿ ಬಯೋಮೆಟ್ರಿಕ್-ಹಾಜರಾತಿಯನ್ನು ದಾಖಲಿಸುವುದು. ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆಯು ಕಾರ್ಯಕಾರಿ ಹುದ್ದೆಯಾಗಿದ್ದು, ಪಂಚತಂತ್ರ 2.0 ತಂತ್ರಾಂಶದಲ್ಲಿ ಬಯೋಮೆಟ್ರಿಕ್-ಹಾಜರಾತಿಯನ್ನು ದಾಖಲಿಸಲು ಮಿದು (ಫ್ಲೆಕ್ಸಿ) ಸಮಯ ಸೌಲಭ್ಯ ಲಭ್ಯವಿರುತ್ತದೆ. ಆದರ ಪ್ರತಿನಿತ್ಯ ಬಯೋಮೆಟ್ರಿಕ್-ಹಾಜರಾತಿಯನ್ನು ದಾಖಲಿಸುವುದು ಕಡ್ಡಾಯವಾಗಿರುತ್ತದೆ. ಗ್ರಾಮ ಪಂಚಾಯತಿ ಕಾರ್ಯದರ್ಶಿ (ಗ್ರೇಡ್-1 ಮತ್ತು ಗ್ರೇಡ್-2), ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳು ಕರ್ತವ್ಯದ ಅವಧಿಯಲ್ಲಿ ಕಡ್ಡಾಯವಾಗಿ ಗ್ರಾಮ ಪಂಚಾಯತಿ ಕಾರ್ಯಾಲಯದಲ್ಲಿ ಲಭ್ಯವಿದ್ದು

ಹೊರಡಿಸಿದೆ
ದಿನಾಂಕ: 14/07/2023



Generated from eOffice by ..., SUPERINTENDENT, KPRC on 06/11/2023 05:45 PM

ಕಾರ್ಯನಿರ್ವಹಿಸುವುದು. ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಗ್ರಾಮ ಪಂಚಾಯತಿಗಳ ಎಲ್ಲಾ ಸರ್ಕಾರಿ ನೌಕರರ ಬಯೋಮೆಟ್ರಿಕ್-ಹಾಜರಾತಿಯನ್ನು ಕಡ್ಡಾಯವಾಗಿ ಪಂಚತಂತ್ರ 2.0 ತಂತ್ರಾಂಶದ ಮೂಲಕ ಪಡೆದು ಪ್ರತಿ ಮಾಹೆ ವೇತನ ಪಾವತಿಸಲು ಕ್ರಮವಹಿಸುವುದು.

3. ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತಿಯ ಎಲ್ಲಾ ಸಿಬ್ಬಂದಿಗಳು (ಕರವಸೂಲಿಗಾರರು, ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್/ ಡಾಟಾ ಎಂಟ್ರಿ ಆಪರೇಟರ್, ಸ್ವಚ್ಛತಾಗಾರರು, ನೀರುಗಂಟಿಗಳು) ಮತ್ತು ಗ್ರಂಥಪಾಲಕರು ಪ್ರತಿದಿನ ಪಂಚತಂತ್ರ 2.0 ತಂತ್ರಾಂಶದಲ್ಲಿ ಕಡ್ಡಾಯವಾಗಿ ಬಯೋಮೆಟ್ರಿಕ್-ಹಾಜರಾತಿಯನ್ನು ದಾಖಲಿಸುವಂತೆ ಕ್ರಮವಹಿಸುವುದು ಮತ್ತು ಸದರಿಯವರ ಪ್ರತಿ ಮಾಹೆಯ ವೇತನವನ್ನು ಬಯೋಮೆಟ್ರಿಕ್-ಹಾಜರಾತಿಯ ಆಧಾರದ ಮೇಲೆ ಪಾವತಿಸುವುದು ಕಡ್ಡಾಯವಾಗಿರುತ್ತದೆ.

ಮೇಲ್ಕಂಡ ಕ್ರಮ ಸಂಖ್ಯೆ 1 ರಿಂದ 3 ವರೆಗಿನ ಸೂಚನೆಗಳನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಕಡ್ಡಾಯವಾಗಿ ಅನುಷ್ಠಾನಗೊಳಿಸಲು ಸಂಬಂಧಪಟ್ಟವರಿಗೆ ಸೂಕ್ತ ನಿರ್ದೇಶನವನ್ನು ನೀಡಿ ಕಾರ್ಯಗತಗೊಳಿಸಲು ತಿಳಿಸಿದೆ.

ತಮ್ಮ ವಿಶ್ವಾಸಿ,

**ಆಯುಕ್ತರು,**
ಕರ್ನಾಟಕ ಪಂ.ರಾಜ್ ಆಯುಕ್ತಾಲಯ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
11/7/2023

**ಪ್ರತಿಯನ್ನು:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ
4. ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಸೂಕ್ತ ಕ್ರಮಕ್ಕಾಗಿ.

ದಿನಾಂಕ 14/07/2023



Generated from eOffice by Rathnamma G, KPRC-SPR(RTG), SUPERINTENDENT, KPRC on 06/11/2023 05:45 PM